ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಕಲ್ಯಾಣ - ಪ್ರವಾಹ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 16/10/20

# ಮಳೆಯಬ್ಬರಕ್ಕೆ ಕಂಗೆಟ್ಟ ಕಲ್ಯಾಣ ಕರ್ನಾಟಕ

# ಬದುಕು ನೀರುಪಾಲು!

## ಮಹಾರಾಷ್ಟ್ರದಿಂದ 5 ಲಕ್ಷ ಕ್ಯುಸೆಕ್ ನೀರು | ಕಲಬುರಗಿ, ಯಾದಗಿರಿ, ವಿಜಯಪುರ ತತ್ತರ 100ಕ್ಕೂ ಹೆಚ್ಚು ಹಳ್ಳಿಗಳ ಜನರ ಜೀವನ ಅಸ್ತವ್ಯಸ್ತ | 9000 ಮಂದಿ ನಿರಾಶ್ರಿತರ ಕೇಂದ್ರಕ್ಕೆ



ಯಾದಗಿರಿ ಜಿಲ್ಲೆ ಶಹಾಪೂರ ತಾಲೂಕಿನ ಹುರಸಗುಂಡಗಿ ಗ್ರಾಮ ಭೀಮಾ ಹಿನ್ನೀರಿನಿಂದಾಗಿ ಮುಳುಗಡೆಯಾಗಿದ್ದು, ಮನೆಮಠಗಳನ್ನು ತೊರೆದು ಸಾಮಾನು-ಸರಂಜಾಮುಗಳೊಂದಿಗೆ ಸುರಕ್ಷಿತ ಸ್ಥಳಕ್ಕೆ ತೆರಳಲು ಕಾದು ಕುಳಿದ ಜನತೆ.

**1 ಸಾವು:** ವಿಜಯಪುರ ಜಿಲ್ಲೆಯಲ್ಲಿ ನಿನ್ನೆ ಓರ್ವ ವ್ಯಕ್ತಿ ಪ್ರವಾಹಕ್ಕೆ ಬಲಿ

**100+ ಗ್ರಾಮ:** ಮಳೆಯಿಂದಾಗಿ ಜಲಾವೃತಗೊಂಡಿರುವ ಹಳ್ಳಿಗಳು

**10000 ಜನ:** ಪ್ರವಾಹದಿಂದಾಗಿ ಸ್ಥಳಾಂತರಗೊಂಡಿರುವ ಜನರು

**300+ ಮಂದಿ:** ಗುರುವಾರ ಪ್ರವಾಹದಿಂದ ರಕ್ಷಣೆ ಆದವರ ಸಂಖ್ಯೆ

**3.87 ಲಕ್ಷ ಎಕರೆ:** ಒಟ್ಟಾರೆ ನೆರೆ ನೀರು ತುಂಬಿರುವ ಕೃಷಿ ಭೂಮಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕಳೆದೆರಡು ದಿನಗಳ ಮಳೆಯಬ್ಬರ ಗುರುವಾರ ಕೊಂಚ ಇಳಿಮುಖವಾದರೂ ಮಹಾರಾಷ್ಟ್ರದ ಜಲಾಶಯಗಳಿಂದ 5 ಲಕ್ಷ ಕ್ಯುಸೆಕ್‌ಗೂ ಹೆಚ್ಚು ನೀರು ಹರಿದುಬರುತ್ತಿರುವ ಹಿನ್ನೆಲೆಯಲ್ಲಿ ಭೀಮಾ ಸೇರಿ ಉತ್ತರ ಕರ್ನಾಟಕದ ಹಲವು ನದಿಗಳು ಅಪಾಯ ಮಟ್ಟ ಮೀರಿ ಹರಿಯುತ್ತಿವೆ. ಪ್ರವಾಹದಿಂದಾಗಿ ಕಲಬುರಗಿ, ಯಾದಗಿರಿ, ವಿಜಯಪುರ ಭಾಗದಲ್ಲಿ ನೂರಾರು ಗ್ರಾಮಗಳ ಜನರ ಬದುಕು ನೀರುಪಾಲಾಗಿದ್ದು, ಅಗತ್ಯ ವಸ್ತುಗಳು, ಲಕ್ಷಾಂತರ ಎಕರೆ ಪ್ರದೇಶದಲ್ಲಿ ಬೆಳೆದು ನಿಂತಿದ್ದ ಬೆಳೆ ಕೊಚ್ಚಿಹೋಗಿವೆ. ಈಗಾಗಲೇ ನದಿತೀರದ 10 ಸಾವಿರಕ್ಕೂ ಹೆಚ್ಚು ಜನ ಸ್ಥಳಾಂತರಗೊಂಡಿದ್ದು, ಈ ಪೈಕಿ 9 ಸಾವಿರ ಮಂದಿಗೆ ಕಾಳಜಿ ಕೇಂದ್ರದಲ್ಲಿ ಆಶ್ರಯ ಕಲ್ಪಿಸಲಾಗಿದೆ. ↘ 13

## ನೆರೆ ಅನಾಹುತ ತಡೆಯಿರಿ: ಸಿಎಂ

### ಸಚಿವರು, ಜಿಲ್ಲಾಧಿಕಾರಿಗಳಿಗೆ ಸೂಚನೆ ಇಂದು ಜಿಲ್ಲಾಡಳಿತಗಳ ಜೊತೆ ಸಭೆ, 3 ಜಿಲ್ಲೆಗಳಿಗೆ ಎನ್‌ಡಿಆರ್‌ಎಫ್ ತಂಡ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದ ಪ್ರವಾಹ ಪರಿಸ್ಥಿತಿ ಅವಲೋಕಿಸುವ ಸಲುವಾಗಿ ಪ್ರವಾಹ ಪೀಡಿತ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯನಿರ್ವಾಹಣಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳ ಜತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಶುಕ್ರವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಲಿದ್ದಾರೆ.



ಅಲ್ಲದೆ, ಪ್ರವಾಹದ ಅನಾಹುತ ತಡೆಗಟ್ಟಲು ನಿಗಾವಹಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ.

ರಾಜ್ಯದಲ್ಲಿ ಕೆಲವು ಜಿಲ್ಲೆಗಳಲ್ಲಿ ವಾಯುಭಾರ ಕುಸಿತದಿಂದ ಕಳೆದ ಮೂರ್ನಾಲ್ಕು ದಿನಗಳಿಂದ ನಿರಂತರ ಮಳೆಯಾಗುತ್ತಿದೆ. ವಿಶೇಷವಾಗಿ ಭೀಮಾ ನದಿಯಲ್ಲಿ ನೀರು ಹೆಚ್ಚಾಗಿರುವುದರಿಂದ ನದಿ ಪಾತ್ರದ ಗ್ರಾಮಗಳು ಪ್ರವಾಹಕ್ಕೊಳಪಟ್ಟಿವೆ. ↘ 13

## ತೆಲಂಗಾಣದಲ್ಲಿ 50, ಮಹಾರಾಷ್ಟ್ರದಲ್ಲಿ 27 ಜನ ಮಳೆಗೆ ಬಲಿ

ಹೈದರಾಬಾದ್/ಮುಂಬೈ: ಬಂಗಾಳಕೊಲ್ಲಿಯಲ್ಲಿ ಉಂಟಾದ ವಾಯುಭಾರ ಕುಸಿತದಿಂದಾಗಿ ಸುರಿದ ದಾಖಲೆ ಮಳೆ ತೆಲಂಗಾಣದಲ್ಲಿ 50 ಜನರನ್ನು ಬಲಿ ಪಡೆದಿದ್ದು, 5000 ಕೋಟಿ ರು. ನಷ್ಟವಾಗಿದೆ ಎಂದು ಮುಖ್ಯಮಂತ್ರಿ ಚಂದ್ರಶೇಖರ ರಾವ್ ತಿಳಿಸಿದ್ದಾರೆ. ಇದೇ ವೇಳೆ, ಮಹಾರಾಷ್ಟ್ರದಲ್ಲೂ ಗುರುವಾರ ಭಾರೀ ಮಳೆಯಾಗಿದ್ದು, 27 ಜನ ಸಾವನ್ನಪ್ಪಿದ್ದಾರೆ. ವಿವರ ↘ 11

## ಇಂದು 2 ಜಿಲ್ಲೆಗೆ ಕಂದಾಯ ಸಚಿವ ಅಶೋಕ್ ಭೇಟಿ

ಪ್ರವಾಹದಬ್ಬರದಿಂದ ತತ್ತರಿಸಿರುವ ಕಲಬುರಗಿ, ಯಾದಗಿರಿ ಜಿಲ್ಲೆಗಳಿಗೆ ಕಂದಾಯ ಸಚಿವ ಆರ್. ಅಶೋಕ್ ಅವರು ಶುಕ್ರವಾರ ಭೇಟಿ ನೀಡಲಿದ್ದಾರೆ. ಈ ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿಯ ಅವಲೋಕನ ನಡೆಸಲಿರುವ ಅವರು, ಅಧಿಕಾರಿಗಳಿಂದ ಹಾನಿ ಕುರಿತು ವಿವರಣೆ ಪಡೆಯಲಿದ್ದಾರೆ.

# ಬದುಕು ನೀರುಪಾಲು!

ಮೊದಲ ಪುಟದಿಂದ

ನೆರೆನೀರಲ್ಲಿ ಸಿಲುಕಿದ್ದ 300ಕ್ಕೂ ಹೆಚ್ಚು ಮಂದಿಯನ್ನು ರಕ್ಷಣೆ ಮಾಡಲಾಗಿದೆ.

ಮಹಾರಾಷ್ಟ್ರದ ಪಶ್ಚಿಮಘಟ್ಟ ಪ್ರದೇಶದಲ್ಲಿ ಭಾರೀ ಮಳೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಅಲ್ಲಿನ ಜಲಾಶಯಗಳಿಂದ ಭೀಮಾ ನದಿಗೆ ಬಿಡುತ್ತಿರುವ ನೀರಿನ ಪ್ರಮಾಣ 7.50 ಲಕ್ಷ ಕ್ಯುಸೆಕ್‌ಗೆ ಏರಿಕೆಯಾಗುವ ಸಾಧ್ಯತೆ ಇದೆ. ಮುನ್ನೆಚ್ಚರಿಕಾ ಕ್ರಮವಾಗಿ ಕಲಬುರಗಿಯಲ್ಲಿ ನದಿಪಾತ್ರದ 148 ಗ್ರಾಮಗಳ ಜನರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರವಾಗುವಂತೆ ಸೂಚಿಸಲಾಗಿದೆ.

ಏತನ್ಮಧ್ಯೆ, ಉತ್ತರ ಕರ್ನಾಟಕದ ಬೆಳಗಾವಿ, ಬಾಗಲಕೋಟೆ, ಕೊಪ್ಪಳ, ಬಳ್ಳಾರಿ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಕಳೆದೆರಡು ದಿನಗಳಿಂದ ಸುರಿಯುತ್ತಿದ್ದ ಮಳೆ ತುಸು ಇಳಿಮುಖಗೊಂಡಿದ್ದು, ಈ ಜಿಲ್ಲೆಗಳಲ್ಲಿ ಆವರಿಸಿದ್ದ ಪ್ರವಾಹದ ಆತಂಕ ಸದ್ಯಕ್ಕೆ ನಿವಾರಣೆಯಾಗಿದೆ. ಆದರೆ, ಕೊಡಗು ಜಿಲ್ಲೆಯಲ್ಲಿ ಕೆಲ ದಿನಗಳಿಂದ ನಿರಂತರವಾಗಿ ಸುರಿಯುತ್ತಿದ್ದ ಮಳೆಯಿಂದಾಗಿ ತ್ರಿವೇಣಿ ಸಂಗಮ ಬಹುತೇಕ ಭರ್ತಿಯಾಗಿದ್ದು, ಈ ಭಾಗದ ನಿವಾಸಿಗಳಲ್ಲಿ ಆತಂಕ ಮೂಡುವಂತೆ ಮಾಡಿದೆ.

**ಸಪ್ತನದಿಗಳಬ್ಬರ:** ಕಲಬುರಗಿಯಲ್ಲಿ ಮಳೆ ಕ್ಷೀಣವಾಗಿದ್ದರೂ ಭೀಮಾ, ಅಮರ್ಜಾ, ಗಂಡೋರಿನಾಲಾ, ಬೆಣ್ಣೆತೊರೆ, ಮುಲ್ಲಾಮಾರಿ, ಕಾಗಿಣಾ ಹಾಗೂ ಕಮಲಾವತಿ ಹೀಗೆ ಸಪ್ತ ನದಿಗಳು ಇನ್ನೂ ಅಪಾಯಮಟ್ಟ ಮೀರಿ ಹರಿಯುತ್ತಿವೆ. ಅಫಜಲ್ಪುರ ತಾಲ್ಲೂಕಿನ ಸೊನ್ನ ಜಲಾಶಯದಿಂದ ಭೀಮಾ ನದಿಗೆ 5.11 ಲಕ್ಷ ಕ್ಯುಸೆಕ್ ನೀರು ಹರಿಬಿಡಲಾಗುತ್ತಿದ್ದು, ಅಫಜಲ್ಪುರ, ಚಿತ್ತಾಪುರ, ಕಲಬುರಗಿ ಹಾಗೂ ಜೇವರ್ಗಿ ತಾಲೂಕುಗಳಲ್ಲಿ ಪ್ರವಾಹದ ತೀವ್ರತೆ ಹೆಚ್ಚಾಗಿದೆ. ಈ ಮಧ್ಯೆ, ಅಫಜಲ್ಪುರ ಪಟ್ಟಣದ ಕೆರೆ ಕೂಡ ಭರ್ತಿಯಾಗಿದ್ದು, ಯಾವುದೇ ಕ್ಷಣದಲ್ಲೂ ಕೋಡಿ ಹರಿದು ತಗ್ಗುಪ್ರದೇಶಕ್ಕೆ ನೀರು ನುಗ್ಗುವ ಸಾಧ್ಯತೆ ಇದೆ. ಹೀಗೆ ಪ್ರವಾಹಕ್ಕಂಜಿ ಜನ ಅಗತ್ಯ ವಸ್ತುಗಳೊಂದಿಗೆ ಊರು ತೊರೆಯುತ್ತಿರುವ ದೃಶ್ಯ ಈ ಭಾಗದಲ್ಲಿ ಅಲ್ಲಲ್ಲಿ ಕಣ್ಣಿಗೆ ಬೀಳುತ್ತಿದೆ. ಈಗಾಗಲೇ ಹೀಗೆ ಊರು ತೊರೆದ 8 ಸಾವಿರಕ್ಕೂ ಹೆಚ್ಚು ಮಂದಿಗೆ 48 ಕಾಳಜಿ ಕೇಂದ್ರಗಳಲ್ಲಿ ಆಶ್ರಯ ನೀಡಲಾಗಿದೆ. ಪ್ರವಾಹದಬ್ಬರಕ್ಕೆ ಜಿಲ್ಲೆಯ ಏಳು ತಾಲೂಕುಗಳ 30 ಗ್ರಾಮಗಳು ಸಂಪೂರ್ಣ ಜಲಾವೃತವಾಗಿದ್ದು 100ಕ್ಕೂ ಹೆಚ್ಚು ಗ್ರಾಮಗಳಿಗೆ ನೀರು ನುಗ್ಗಿದೆ. ಅಪಾಯದಲ್ಲಿ ಸಿಲುಕಿದ್ದ 150ಕ್ಕೂ ಹೆಚ್ಚು ಮಂದಿಯನ್ನು ಎನ್‌ಡಿಆರ್‌ಎಫ್ ನೆರವಿನೊಂದಿಗೆ ರಕ್ಷಿಸಲಾಗಿದೆ. ನೆರೆಯ ಯಾದಗಿರಿಯಲ್ಲಿ 97 ಕುಟುಂಬಗಳನ್ನು ಈಗಾಗಲೇ ರಕ್ಷಣೆ ಮಾಡಲಾಗಿದ್ದು, ನದಿ ತೀರದ ಪ್ರದೇಶಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.

**50 ಕುಟುಂಬ ಸ್ಥಳಾಂತರ:** ಕಲಬುರಗಿ ರೀತಿಯಲ್ಲೇ ಪ್ರವಾಹದ ಆತಂಕದಲ್ಲಿರುವ ವಿಜಯಪುರದಲ್ಲೂ ಡೋಣಿ ಮತ್ತು ಭೀಮಾ ನದಿಗಳೂ ಪ್ರವಾಹಮಟ್ಟದಲ್ಲೇ ಹರಿಯುತ್ತಿವೆ. ಪ್ರವಾಹದಲ್ಲಿ ಸಿಕ್ಕಿಹಾಕಿಕೊಂಡಿದ್ದ ಸಿಂದಗಿ ತಾಲೂಕಿನ ತಾರಾಪುರ ಗ್ರಾಮದ 50ಕ್ಕೂ ಮಂದಿಯನ್ನು ರಕ್ಷಿಸಿ ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದೆ. ಅಗತ್ಯಬಿದ್ದರೆ ಇನ್ನಷ್ಟು ಗ್ರಾಮಗಳ ಜನರನ್ನು ಸ್ಥಳಾಂತರಿಸಲು ಅಗತ್ಯ ಕ್ರಮಕೈಗೊಳ್ಳಲಾಗಿದೆ. ಪ್ರವಾಹದ ಹೊಡೆತಕ್ಕೆ ಜಿಲ್ಲೆಯಲ್ಲಿ ಒಟ್ಟಾರೆ 5 ಸಾವಿರ ಹೆಕ್ಟೇರ್‌ಗೂ ಹೆಚ್ಚು ಪ್ರದೇಶ ಕಬ್ಬು ಸೇರಿದಂತೆ ವಿವಿಧ ಬೆಳೆಹಾನಿಯಾಗಿದೆ.

**ಕೊಚ್ಚಿಹೋದ ವ್ಯಕ್ತಿ:** ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ತಾಲೂಕಿನ ಮುಳಸಾವಳಗಿ ಬಳಿ ಹಳ್ಳ ದಾಟಲು ಹೋದ ಶಿವಪುತ್ರ ನಾಟೀಕರ್(40) ಎಂಬಾತ ಪ್ರವಾಹ ನೀರಿನಲ್ಲಿ ಕೊಚ್ಚಿಹೋಗಿದ್ದಾನೆ.

# ನೆರೆ ಅನಾಹುತ ತಡೆಯಿರಿ: ಸಿಎಂ

ಮೊದಲ ಪುಟದಿಂದ

ಈಗಾಗಲೇ ಜಿಲ್ಲಾಡಳಿತಗಳು ಮುಂಜಾಗ್ರತಾ ಕ್ರಮವಾಗಿ ಅಪಾಯದಲ್ಲಿರುವ ಜನರನ್ನು ಗಂಜಿ ಕೇಂದ್ರಗಳಿಗೆ ಸ್ಥಳಾಂತರಿಸಲು ಕ್ರಮ ಕೈಗೊಂಡಿವೆ ಎಂದು ಹೇಳಿದ್ದಾರೆ.

ಜನರ ಸುರಕ್ಷತೆ ದೃಷ್ಟಿಯಿಂದ ಕಲುಬರಗಿಯಲ್ಲಿ 2, ಯಾದಗಿರಿಯಲ್ಲಿ 2 ಮತ್ತು ರಾಯಚೂರಿನಲ್ಲಿ 1 ಎನ್‌ಡಿಆರ್‌ಎಫ್ ತಂಡಗಳು ಕಾರ್ಯ ನಿರ್ವಹಿಸುತ್ತಿವೆ. ಹೆಚ್ಚುವರಿಯಾಗಿ ಮತ್ತೆ ತಲಾ ಒಂದೊಂದು ತಂಡವನ್ನು ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಳುಹಿಸಲಾಗುತ್ತದೆ. ಹಾಗೆ ಈ ರಕ್ಷಣಾ ಕಾರ್ಯಕ್ಕಾಗಿ ಬೀದರ್ ವಿಮಾನ ನಿಲ್ದಾಣದಲ್ಲಿ ಎರಡು ಹೆಲಿಕಾಪ್ಟರ್‌ಗಳನ್ನು ಸನ್ನದ್ಧಗೊಳಿಸಲಾಗುತ್ತದೆ. ಪ್ರವಾಹಪೀಡಿತ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಶುಕ್ರವಾರ ಬೆಳಗ್ಗೆ 11 ಗಂಟೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ಕರೆಯಲಾಗಿದೆ. ಮಳೆ ನಿಂತ ನಂತರ ಹಾನಿ ಬಗ್ಗೆ ಸಮೀಕ್ಷೆ ನಡೆಸಿ ಪರಿಹಾರ ನೀಡಲಾಗುತ್ತದೆ.

ಜನರು ಯಾವುದೇ ಆತಂಕಪಡುವ ಅಗತ್ಯವಿಲ್ಲ ಎಂದು ಮುಖ್ಯಮಂತ್ರಿಗಳು ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.